ಕರ್ನಾಟಕ ಸರ್ಕಾರ
**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,**
**ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ,**
**ಬೆಂಗಳೂರು–560 009**

ಸಂಖ್ಯೆ: ಸಿಎಸಿ–6 ಟಿ.ಇ.ಟಿ ಪರೀಕ್ಷೆ ಕೀ.ಉ/2018–19 ದಿನಾಂಕ: 09–03–2019

**ಪತ್ರಿಕಾ ಪ್ರಕಟಣೆ**

ಸಾರ್ವಜನಿಕ ಶಿಕ್ಷಣ ಇಲಾಖೆಯ ಕೇಂದ್ರೀಕೃತ ದಾಖಲಾತಿ ಘಟಕದಿಂದ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ–2018ಯನ್ನು ದಿನಾಂಕ: 03–02–2019 ರಂದು ರಾಜ್ಯದ ಎಲ್ಲಾ 34 ಜಿಲ್ಲೆಗಳಲ್ಲಿ ನಡೆಸಲಾಯಿತು. ಅರ್ಹತಾ ಪರೀಕ್ಷೆ ಪತ್ರಿಕೆ–1 (1 ರಿಂದ 5ನೇತರಗತಿಗೆ ಬೋಧಿಸುವ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ಮತ್ತು ಪತ್ರಿಕೆ–2 (6 ರಿಂದ 8ನೇ ತರಗತಿ ಬೋಧಿಸುವ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ) ನಡೆಸಲಾಯಿತು. ಶಿಕ್ಷಕರ ಅರ್ಹತಾ ಪರೀಕ್ಷೆಯು ಭಾಷೆ–1 ಮತ್ತು ಭಾಷೆ–2 ರಲ್ಲಿ 08 ಭಾಷೆಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು ಮರಾಠಿ ಹಿಂದಿ ಮತ್ತು ಸಂಸ್ಕೃತ) ಹಾಗೂ ಐಚ್ಛಿಕ ವಿಷಯದ ಪತ್ರಿಕೆಗಳು 07 ಭಾಷಾ ಮಾಧ್ಯಮಗಳನ್ನು (ಕನ್ನಡ, ಇಂಗ್ಲೀಷ್, ಉರ್ದು, ತಮಿಳು, ತೆಲುಗು, ಮರಾಠಿ ಮತ್ತು ಹಿಂದಿ) ಒಳಗೊಂಡಿತ್ತು.

ಅಭ್ಯರ್ಥಿಗಳಿಗೆ QR ಕೋಡ್ ದತ್ತಾಂಶವನ್ನು ಹೊಂದಿರುವ ಪೂರ್ವ ಮುದ್ರಿತ OMR ಉತ್ತರ ಪತ್ರಿಕೆಯ ಹಾಳೆಗಳನ್ನು ನೀಡಲಾಗಿದ್ದರಿಂದ , ಪರೀಕ್ಷಾ ನಂತರದ ಪ್ರಕ್ರಿಯೆಗಳ ಕಾಲಾವಕಾಶವು ಗಮನಾರ್ಹವಾಗಿ ಕಡಿಮೆಯಾಗಿದೆ. ಪರೀಕ್ಷಾ ಕೇಂದ್ರಗಳಿಂದ ಸ್ವೀಕರಿಸಲಾದ ಅಭ್ಯರ್ಥಿಗಳ OMR ಉತ್ತರ ಪತ್ರಿಕೆಯ ಹಾಳೆಗಳನ್ನು ಸ್ಕ್ಯಾನ್ ಮಾಡಿ ಅದರ ಛಾಯಾ ಪ್ರತಿಯನ್ನು (Image) ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಲು ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿತ್ತು.

ಶಿಕ್ಷಕರ ಅರ್ಹತಾ ಪರೀಕ್ಷೆಯ ಕೀ ಉತ್ತರಗಳನ್ನು ದಿನಾಂಕ:18–02–2019 ರಂದು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಿ ಅಭ್ಯರ್ಥಿಗಳಿಗೆ ಆಕ್ಷೇಪಣೆ ಸಲ್ಲಿಸಲು ದಿನಾಂಕ:25–02–2019 ರ ವರೆಗೆ ಕಾಲಾವಕಾಶ ನೀಡಲಾಗಿತ್ತು. ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಒಟ್ಟು 17472 ಆಕ್ಷೇಪಣೆಗಳನ್ನು ಸ್ವೀಕರಿಸಿ, ಪರಿಶೀಲಿಸಲಾಗಿದೆ. ಪ್ರತಿ ವಿಷಯದ ತಜ್ಞರನ್ನೊಳಗೊಂಡ ಸಮಿತಿಯಿಂದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಸಮಿತಿಯು ನೀಡಿದ ವರದಿಯನ್ವಾಧರಿಸಿ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ: 08–03–2019 ರಂದು ಪ್ರಕಟಿಸಲಾಗಿದೆ.

ಪರಿಷ್ಕೃತ ಕೀ ಉತ್ತರಗಳನ್ನು ಆಧರಿಸಿ OMR ಉತ್ತರ ಪತ್ರಿಕೆ ಹಾಳೆಗಳನ್ನು ಮೌಲ್ಯಮಾಪನ ಮಾಡಿ ಫಲಿತಾಂಶಗಳನ್ನು ಲೆಕ್ಕಾಚಾರ ಮಾಡಿದೆ. ಆದರಂತೆ, ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಪತ್ರಿಕೆಗಳಲ್ಲಿ ಶೇ60ರಷ್ಟು ಅರ್ಹತಾ ಅಂಕಗಳು ಹಾಗೂ ಪ.ಜಾತಿ , ಪ.ಪಂ, ಪ್ರವರ್ಗ–1 ಹಾಗೂ ವಿಕಲಚೇತನ ಅಭ್ಯರ್ಥಿಗಳಿಗೆ ಶೇ 55 ರಷ್ಟು ಅರ್ಹತಾ ಅಂಕಗಳನ್ನು ಲೆಕ್ಕಾಚಾರಕ್ಕೆ ಪರಿಗಣಿಸಿದೆ.

**ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ–2018 ರ ಅಂಕಿ ಅಂಶಗಳು ಕೆಳಗಿನಂತಿವೆ.**

| ಪತ್ರಿಕೆ | I | II | ಒಟ್ಟು |
|---|---|---|---|
| ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು | 87166 | 172907 | 260073 |
| ಹಾಜರಾದ ಅಭ್ಯರ್ಥಿಗಳು | 79280 | 160583 | 239863 |
| ಶೇ 60 ರಷ್ಟು ಅರ್ಹತಾ ಅಂಕಗಳನ್ನು ಪಡೆದ ಅಭ್ಯರ್ಥಿಗಳು | 1593 | 17054 | 18647 |
| ಶೇ 55 ರಷ್ಟು ಅರ್ಹತಾ ಅಂಕಗಳನ್ನು ಪಡೆದ ಅಭ್ಯರ್ಥಿಗಳು | 1560 | 10067 | 11627 |
| ಅರ್ಹತೆ ಪಡೆದ ಒಟ್ಟು ಅಭ್ಯರ್ಥಿಗಳು | 3153 | 27121 | 30274 |
| ಶೇ ವಾರು ಅರ್ಹತೆ ಪಡೆದ ಅಭ್ಯರ್ಥಿಗಳು | 3.98 | 16.89 | 12.62 |
| 2016 ರಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳ ಸಂಖ್ಯೆ | 8282 | 6094 | 14376 |
| 2016 ರಲ್ಲಿ ಶೇ ವಾರು ಅರ್ಹತೆ ಪಡೆದ ಅಭ್ಯರ್ಥಿಗಳು | 8.25 | 3.92 | 5.62 |

ಅರ್ಹತಾ ಅಂಕಗಳನ್ನು ಗಳಿಸಿದ ಅಭ್ಯರ್ಥಿಗಳಿಗೆ ಗಣಕೀಕೃತ ಅಂಕಪಟ್ಟಿ (Electronic Marks Card) ವಿತರಿಸಲಾಗುವುದು. ಕೇಂದ್ರೀಕೃತ ದಾಖಲಾತಿ ಘಟಕದಿಂದ ಈ ಸಂಬಂಧ ಮುದ್ರಿತ ಅಂಕಪಟ್ಟಿಯನ್ನು ವಿತರಿಸುವುದಿಲ್ಲ. ಬದಲಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ನಿಡಲಾದ ಲಿಂಕ್ ಮೂಲಕ ಸುರಕ್ಷತಾ ಕೋಡ್ ಹೊಂದಿರುವ ಗಣಕೀಕೃತ ಪ್ರಮಾಣ ಪತ್ರದ ಪ್ರತಿಯನ್ನು ಪಡೆದುಕೊಳ್ಳಬಹುದಾಗಿದೆ.. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿರುವಂತೆ **ತಮ್ಮ ಹೆಸರಿನ ಮೊದಲ ಮೂರು ಅಕ್ಷರಗಳನ್ನು (ಆಂಗ್ಲಭಾಷೆಯಲ್ಲಿ) ಹಾಗೂ ಅವರದೇ ಜನ್ಮ ದಿನಾಂಕವನ್ನು** ನಮೂದಿಸಿ ಗಣಕೀಕೃತ ಪ್ರಮಾಣಪತ್ರವನ್ನು ಪಡೆದುಕೊಳ್ಳುವುದು.

ಅಭ್ಯರ್ಥಿಗಳ ಅವಶ್ಯಕತೆಗನುಗುಣವಾಗಿ ಅಗತ್ಯವಿರುವ ಸಂಖ್ಯೆಯ ಗಣಕೀಕೃತ ಅಂಕಪಟ್ಟಿಗಳನ್ನು ಪಡೆದುಕೊಳ್ಳಬಹುದಾಗಿದ್ದು, ಇದರಿಂದಾಗಿ ಅಭ್ಯರ್ಥಿಗಳು ಭವಿಷ್ಯದಲ್ಲಿ ಅನಾವಶ್ಯಕವಾಗಿ ಅಂಕಪಟ್ಟಿಯ ನಕಲು ಪ್ರಮಾಣ ಪತ್ರ ಪಡೆಯಲು ಇಲಾಖೆಯನ್ನು ಸಂಪರ್ಕಿಸುವ ಅಗತ್ಯವಿರುವುದಿಲ್ಲ. ಅಭ್ಯರ್ಥಿಗಳು ದಿನಾಂಕ: 20/03/2019ರ ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾದ ಲಿಂಕ್ ಮೂಲಕ ತಮ್ಮ ಪ್ರಮಾಣ ಪತ್ರವನ್ನು ಪಡೆದುಕೊಳ್ಳಬಹುದಾಗಿದ್ದು, ಪ್ರಮಾಣ ಪತ್ರದ ನೈಜತೆಯನ್ನು ಪರೀಕ್ಷಿಸಿಕೊಳ್ಳಲು ವೆಬ್‌ಸೈಟ್‌ನಲ್ಲಿ ಅವಕಾಶ ನೀಡಲಾಗಿದೆ.

2018ರ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಕಾಲಮಿತಿಯ ಅವಧಿಯಲ್ಲಿ ನಡೆಸಿ, ಫಲಿತಾಂಶ ನೀಡಲು ಪೂರ್ಣ ಸಹಕಾರ ನೀಡಿದ ಸನ್ಮಾನ್ಯ ಮುಖ್ಯಮಂತ್ರಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಪ್ರಧಾನ ಕಾರ್ಯದಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಅಪರ ಮುಖ್ಯ ಕಾರ್ಯದರ್ಶಿಗಳು (ಡಿ.ಪಿ.ಎ.ಆರ್ ಇ–ಆಡಳಿತ) ಮತ್ತು ಎನ್.ಐ.ಸಿ ಕರ್ನಾಟಕ ರವರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯು ಅಭಾರಿಯಾಗಿರುತ್ತದೆ.

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ